# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಎನ್.ಜಿ.ಮಂಗಲಗಿ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಯೋಜನಾ ಉಪ ವಿಭಾಗ, ಬಿಜಾಪುರ ಇವರ ವಿರುದ್ಧ ಶಿಸ್ತು ಕ್ರಮ – ಅಂತಿಮ ಆದೇಶ.

**ಓದಲಾಗಿದೆ:-**
1) ಸರ್ಕಾರದ ಆದೇಶ ಸಂಖ್ಯೆ ಗ್ರಾಅಪ 3 ಇಎನ್‌ಕ್ಯೂ 2014 2014 ದಿನಾಂಕ 15-03-2014.
2) ಮಾನ್ಯ ಉಪ ಲೋಕಾಯುಕ್ತರವರ ಶಿಫಾರಸ್ಸು ವರದಿ ಸಂಖ್ಯೆ LOK/ARE-1/ ENQ-245/2014 ದಿನಾಂಕ 10-04-2015
3) ಅಪರ ನಿಬಂಧಕರು ವಿಚಾರಣೆಗಳು-1, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ಇವರ ಇಲಾಖಾ ವಿಚಾರಣೆ ವರದಿ ಸಂಖ್ಯೆ LOK/ARE-1/ ENQ-245/2014 ದಿನಾಂಕ 10-04-2015

*****

**ಪ್ರಸ್ತಾವನೆ:**

ಶ್ರೀ ಎನ್.ಜಿ.ಮಂಗಲಗಿ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಯೋಜನಾ ಉಪ ವಿಭಾಗ, ಬಿಜಾಪುರ ಇವರು ಸರ್ವೇಯರ್ ಜೊತೆಗೂಡಿ ಜಂಟಿಯಾಗಿ ಬೋರ್‌ವೆಲ್‌ನ **Location Sketch** ತಯಾರಿಸಿ ಸಲ್ಲಿಸುವಲ್ಲಿ ಹಾಗೂ ಲೋಕಾಯುಕ್ತ ಕಚೇರಿಯು ದಿನಾಂಕ 10-11-2013ರಂದು ನೀಡಿದ್ದ ಕಾರಣ ಕೇಳುವ ನೋಟೀಸಿಗೆ ಉತ್ತರ ನೀಡಲು ವಿಫಲರಾಗಿರುವುದು ಮೇಲ್ನೋಟಕ್ಕೆ ಕಂಡುಬಂದಿದ್ದರಿಂದ, ಸದರಿ ಕರ್ತವ್ಯಲೋಪಕ್ಕೆ ಸಂಬಂಧಿಸಿದಂತೆ ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಗಳು 1957ರ ನಿಯಮ 11ರಂತೆ ನಡೆಸಲು ಸದರಿ ನಿಯಮಗಳ ನಿಯಮ 14(ಎ) ರನ್ವಯ ಪ್ರಕರಣವನ್ನು ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ 15-3-2014ರ ಆದೇಶದಲ್ಲಿ ಮಾನ್ಯ ಉಪ ಲೋಕಾಯುಕ್ತ-1 ರವರಿಗೆ ವಹಿಸಲಾಗಿತ್ತು.

ಸದರಿ ಆದೇಶದ ಅನುಸಾರ ಮಾನ್ಯ ಉಪಲೋಕಾಯುಕ್ತರವರು ಅಪರ ನಿಬಂಧಕರು, ವಿಚಾರಣೆಗಳು-1 ಇವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಿರುತ್ತಾರೆ. ವಿಚಾರಣಾಧಿಕಾರಿಯವರು ಶ್ರೀ ಎನ್.ಜಿ.ಮಂಗಲಗಿ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ರವರ ವಿರುದ್ಧದ ಆರೋಪಕ್ಕೆ ಸಂಬಂಧಿಸಿದಂತೆ ವಿವರವಾಗಿ ವಿಚಾರಣೆ ನಡೆಸಿ ವರದಿಯನ್ನು ಮಾನ್ಯ ಉಪಲೋಕಾಯುಕ್ತರವರಿಗೆ ದಿ: 20.3.2015 ರಂದು ಸಲ್ಲಿಸಿದ್ದು ಮಾನ್ಯ ಉಪ ಲೋಕಾಯುಕ್ತರವರು ವಿಚಾರಣಾ ವರದಿಯನ್ನು ಪರಿಶೀಲಿಸಿ ದಿ: 10.4.2015ರ ವರದಿಯಲ್ಲಿ ತಮ್ಮ ಶಿಫಾರಸ್ಸನ್ನು ಮಾಡಿರುತ್ತಾರೆ. ವಿಚಾರಣಾ ವರದಿ, ಮಾನ್ಯ ಉಪಲೋಕಾಯುಕ್ತರವರ ಶಿಫಾರಸ್ಸು ಹಾಗೂ ಇತರೆ ದಾಖಲೆಗಳನ್ನು ಸರ್ಕಾರಕ್ಕೆ ಮೇಲೆ ಕ್ರಮ ಸಂ: 2ರಲ್ಲಿ ಓದಲಾದ ಪತ್ರದೊಂದಿಗೆ ಸರ್ಕಾರಕ್ಕೆ ಕಳುಹಿಸಿ ಈ ಬಗ್ಗೆ ಅಗತ್ಯ ಕ್ರಮ ಕೈಗೊಳ್ಳಲು ಮಾನ್ಯ ಉಪ ಲೋಕಾಯುಕ್ತರವರ ಆಪ್ತ ಸಹಾಯಕರು ಕೋರಿದ್ದಾರೆ.

ಸರ್ಕಾರವು ವಿಚಾರಣಾ ವರದಿ, ಮಾನ್ಯ ಉಪಲೋಕಾಯುಕ್ತರವರ ಶಿಫಾರಸ್ಸು ಹಾಗೂ ಇತರೆ ದಾಖಲೆಗಳನ್ನು ಪರಿಶೀಲಿಸಿದೆ. ಶ್ರೀ ಎನ್.ಜಿ.ಮಂಗಲಗಿ, ಸಕಾಇಂ ಇವರು ಬಿಜಾಪುರ ತಾಲ್ಲೂಕು, ಹಂಚಿನಾಳ ಪಿ.ಹೆಚ್.ಗ್ರಾಮದಲ್ಲಿ ಕೊರೆಯಲಾದ ಕೊಳವೆ ಬಾವಿಯ ಸ್ಥಳದ ಸ್ಕೇಚ್‌ನ್ನು ಸರ್ವೇಯರ್‌ರವರೊಂದಿಗೆ ಜಂಟಿಯಾಗಿ ಪರಿಶೀಲನೆ ನಡೆಸಿ ಸಲ್ಲಿಸಲು ನಿರ್ದೇಶನ ನೀಡಿದ್ದಾಗಿಯೂ ಅವರು ಉತ್ತರ ಸಲ್ಲಿಸಲು ವಿಫಲರಾದ ಕಾರಣ ಸದರಿಯವರಿಗೆ ದಿನಾಂಕ 11-10-2013ರಂದು ಕಾರಣ ಕೇಳುವ ನೋಟೀಸ್ ನೀಡಿ, ಏಕೆ ಶಿಸ್ತಿನ ಕ್ರಮ ಕೈಗೊಳ್ಳಬಾರದೆಂಬ ಬಗ್ಗೆ ತಿಳಿಸಲಾಗಿತ್ತೆಂದು, ಅದಕ್ಕೂ ಸಹ ಆಪಾದಿತರು ಯಾವುದೇ ಉತ್ತರ ಸಲ್ಲಿಸದೇ ತಮ್ಮ ಕರ್ತವ್ಯದಲ್ಲಿ ಸಂಪೂರ್ಣ ನಿಷ್ಠೆಯನ್ನು ತೋರದೆ ಕರ್ತವ್ಯಲೋಪವೆಸಗಿ ನಡತೆ ನಿಯಮಗಳ ನಿಯಮ 3(1)(i) ರಿಂದ (iii) ನ್ನು ಉಲ್ಲಂಘಿಸಿ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ವರ್ತಿಸಿರುತ್ತಾರೆಂದು ಆರೋಪಿಸಲಾಗಿದೆ.

ಸದರಿ ಆರೋಪಕ್ಕೆ ಸಂಬಂಧಿಸಿದಂತೆ ವಿಚಾರಣಾಧಿಕಾರಿಗಳು ಲಭ್ಯವಿರುವ ಸಾಕ್ಷ್ಯಾಧಾರಗಳನ್ನು ಪರಿಗಣಿಸಿ ವಿವರವಾಗಿ ವಿಚಾರಣೆ ನಡೆಸಿ ಆಪಾದಿತರ ವಿರುದ್ಧದ ಅರೋಪವು ಸಾಬೀತಾಗಿದೆ ಎಂದು ಅಭಿಪ್ರಾಯಪಟ್ಟು ಸಲ್ಲಿಸಿರುವ ವರದಿಯನ್ನು ಮಾನ್ಯ ಉಪಲೋಕಾಯುಕ್ತರವರು ಸಮಗ್ರವಾಗಿ ಪರಿಶೀಲಿಸಿರುತ್ತಾರೆ. ಆಪಾದಿತರು ಸದರಿ ಲೋಪಕ್ಕೆ ಸಂಬಂಧಿಸಿದಂತೆ ದಿನಾಂಕ 30-11-2013ರಂದು ವಿವರಣೆಯನ್ನು ಲೋಕಾಯುಕ್ತ ಕಚೇರಿಯ ವಿಚಾರಣಾಧಿಕಾರಿಯವರಿಗೆ ಸಲ್ಲಿಸಿರುತ್ತಾರೆ. ಆದರೆ, ಸದರಿ ವಿವರಣೆಯನ್ನು ಸಂಬಂಧಪಟ್ಟ ವಿಷಯ ನಿರ್ವಾಹಕರು ಕೂಡಲೇ ಮಂಡಿಸದೆ ವಿಳಂಬಿಸಿ ದಿನಾಂಕ 7-2-2014ರಂದು ವಿಳಂಬವಾಗಿ ಮಂಡಿಸಿರುವ ಅಂಶವನ್ನು ಪರಿಗಣಿಸಿ ಆಪಾದಿತರ ಮೇಲಿನ ಆರೋಪವು

ಭಾಗಶ: ರುಜುವಾತಾಗಿದೆ ಎಂದು ತೀರ್ಮಾನಿಸಿದ್ದು, ಸದರಿ ರುಜುವಾತಾದ ಆರೋಪದ ಗಂಭೀರತೆಯನ್ನು ಪರಿಗಣನೆಗೆ ತೆಗೆದುಕೊಂಡು ಆಪಾದಿತರಿಗೆ ವನಿಮೇ ನಿಯಮಗಳ ನಿಯಮ 8 (ii) ರ ಪ್ರಕಾರ ದಂಡನೆ ವಿಧಿಸಿ, ಇನ್ನು ಮುಂದೆ ವಿವರಣೆಗಳನ್ನು ಕಚೇರಿಗಳ ಮೂಲಕ ಸಲ್ಲಿಸಲು ತಿಳಿಸದೆ ನೇರವಾಗಿ ಸಲ್ಲಿಸಲು ತಿಳಿಸಬಹುದೆಂದು ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮೇಲಿನ ವಿವರಗಳನ್ನು ಪರಿಶೀಲಿಸಿದ್ದು ಪ್ರಕರಣದಲ್ಲಿ ಆಪಾದಿತರಾಗಿರುವ ಶ್ರೀ ಎನ್.ಜಿ.ಮಂಗಲಗಿ, ಸ.ಕಾ.ಇಂ. ರವರು ಲೋಕಾಯುಕ್ತ ಕಚೇರಿ ನೀಡಿದ್ದ ಕಾರಣ ಕೇಳುವ ನೋಟೀಸಿಗೆ ವಿವರಣೆಯನ್ನು ಸಲ್ಲಿಸುವಲ್ಲಿ ಆಗಿರುವ ವಿಳಂಬಕ್ಕೆ ಕಾರಣಗಳನ್ನು ಪರಿಗಣಿಸಿ ಮಾನ್ಯ ಉಪಲೋಕಾಯುಕ್ತರವರು ತೀರ್ಮಾನಿಸಿರುವುದು ಸಮಯೋಚಿತವಾಗಿರುವುದರಿಂದ ಶ್ರೀ ಎನ್.ಜಿ.ಮಂಗಲಗಿ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರ ಕರ್ತವ್ಯ ಲೋಪಕ್ಕೆ ಸಂವಾದಿಯಾಗಿ ದಂಡನೆಯನ್ನು ವಿಧಿಸಲು ಸರ್ಕಾರವು ತೀರ್ಮಾನಿಸಿದೆ. ಆದ್ದರಿಂದ ಈ ಕೆಳಕಂಡ ಆದೇಶ.

**ಆದೇಶ ಸಂಖ್ಯೆ. ಗ್ರಾಅಪ 175 ಜಿಪಅ 2015, ಬೆಂಗಳೂರು,**
**ದಿನಾಂಕ 22-07-2015**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು ಶ್ರೀ ಎನ್.ಜಿ.ಮಂಗಲಗಿ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಯೋಜನಾ ಉಪ ವಿಭಾಗ, ಬಿಜಾಪುರ ಇವರ ವಿರುದ್ಧದ ಸಾಬೀತಾದ ಆರೋಪದ ಗಂಭೀರತೆಗೆ ಅನುಗುಣವಾಗಿ ಸದರಿಯವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 8 (ii) ರನ್ವಯ **"ವಾಗ್ದಂಡನೆ"** ವಿಧಿಸಿದೆ.

ಇನ್ನು ಮುಂದೆ ಲೋಕಾಯುಕ್ತ ಕಚೇರಿಯ ನೋಟೀಸುಗಳಿಗೆ ನೇರವಾಗಿ ಉತ್ತರಗಳನ್ನು ಸಲ್ಲಿಸಲು ಎಚ್ಚರಿಕೆ ವಹಿಸುವಂತೆ ತಿಳಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಸಿದ್ದೇಶ ಪೋತಲಕಟ್ಟಿ),
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಎಂ.ಎಸ್.ಬಿಲ್ಡಿಂಗ್, ಬೆಂಗಳೂರು.
4. ಅಪರ ನಿಬಂಧಕರು ವಿಚಾರಣೆಗಳು-1, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ವಿಜಯಪುರ.
6. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ, ಬೆಂಗಳೂರು
7. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
8. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡ (ದಕ್ಷಿಣ), ಕೆ.ಆರ್.ಸರ್ಕಲ್, ಬೆಂಗಳೂರು.
9. ಶ್ರೀ ಎನ್.ಜಿ.ಮಂಗಲಗಿ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ರಾಷ್ಟ್ರೀಯ ಹೆದ್ದಾರಿ ಉಪ ವಿಭಾಗ, ವಿಜಯಪುರ.

ಪ್ರತಿ ಮಾಹಿತಿಗಾಗಿ:

1. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, (ಸೇವೆಗಳು-ಎ & ಸಿ).
2. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ. ಗ್ರಾ.ಅ.ಪಂ.ರಾಜ್ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ / ಸರ್ಕಾರದ ಕಾರ್ಯದರ್ಶಿ (ಪಂ.ರಾಜ್) / ಅಪರ ಕಾರ್ಯದರ್ಶಿ (ಆಡಳಿತ) ಇವರ ಆಪ್ತ ಕಾರ್ಯದರ್ಶಿ/ ಆಪ್ತ ಸಹಾಯಕರಿಗೆ.
3. ನಿರ್ದೇಶಕರು (ಪಂ.ರಾಜ್), ಗ್ರಾ.ಅ.ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕರಿಗೆ
4. ಮಾಹಿತಿ ಕೇಂದ್ರ : ಹೆಚ್ಚುವರಿ ಪ್ರತಿ:ರಕ್ಷಾ ಕಡತ ; ಕಂಪ್ಯೂಟರ್ ಸೆಲ್.